# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 446 |
| ಸದಸ್ಯರ ಹೆಸರು | : | ಶ್ರೀ ಹೆಚ್. ಎಸ್. ಗೋಪಿನಾಥ್ |
| ಉತ್ತರಿಸುವ ಸಚಿವರು | : | ಉಪ ಮುಖ್ಯಮಂತ್ರಿ, ಕಂದಾಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ |
| ಉತ್ತರಿಸುವ ದಿನಾಂಕ | : | 19.08.2026 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಭೂ ದಾಖಲೆಗಳನ್ನು (ಆರ್.ಟಿ.ಸಿ/ಪಹಣಿ) ಸಮಯಕ್ಕೆ ಸರಿಯಾಗಿ ನವೀಕರಿಸದಿರುವುದರಿಂದ ರೈತರಿಗೆ ಸಾಲ ಮತ್ತು ಬೆಳೆ ವಿಮೆಗಾಗಿ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: (ವಿವರ ನೀಡುವುದು) | • ಭೂಮಿ ಮತ್ತು ಕಾವೇರಿ ತಂತ್ರಾಂಶವನ್ನು ಸಂಯೋಜನೆ ಮಾಡಲಾಗಿದ್ದು, ಅದರಂತೆ ಕಾವೇರಿ ತಂತ್ರಾಂಶದಲ್ಲಿ ಕ್ರಯ, ದಾನ, ವಿಭಾಗದ ಮೂಲಕ ನೋಂದಣಿಯಾದ ನಂತರ, ಸದರಿ ಮಾಹಿತಿಯನ್ನು ಭೂಮಿ ತಂತ್ರಾಂಶಕ್ಕೆ ವರ್ಗಾಯಿಸಲಾಗುತ್ತದೆ ಹಾಗೂ 7 ದಿನಗಳ ನೋಟೀಸು ಅವಧಿಯಲ್ಲಿ ಯಾವುದೇ ತಕರಾರು ಸ್ವೀಕೃತವಾಗದಿದ್ದಲ್ಲಿ, ಆಟೋ ಮ್ಯುಟೇಶನ್ ಮೂಲಕ ಖಾತಾ ಬದಲಾವಣೆ ಮಾಡಲಾಗುತ್ತದೆ.<br>• ಇ-ಪೌತಿ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದ್ದು, ಸದರಿ ತಂತ್ರಾಂಶದ ಮೂಲಕ ಮೃತ ಖಾತೆದಾರರ ವಾರಸುದಾರರ ಹೆಸರಿಗೆ ಖಾತಾ ಬದಲಾವಣೆ ಮಾಡಲು ಕ್ರಮವಹಿಸಲಾಗುತ್ತಿದೆ.<br>• ಭೂಮಿ ತಂತ್ರಾಂಶದಲ್ಲಿ ಎಲ್ಲಾ ನೋಟೀಸ್ ರಹಿತ ಹಾಗೂ ನೋಟೀಸ್ ಸಹಿತ (ಯಾವುದೇ ತಕರಾರು ಇಲ್ಲದಿದ್ದಲ್ಲಿ) ಮ್ಯುಟೇಶನ್‌ಗಳು ಸ್ವಯಂಚಾಲಿತವಾಗಿ ತಂತ್ರಾಂಶದ ಮೂಲಕವೇ ಅನುಮೋದನೆ ಆಗುವಂತೆ ಆಟೋ ಮ್ಯುಟೇಶನ್ ತಂತ್ರಾಂಶವನ್ನು ಅಳವಡಿಸಲಾಗಿರುವುದರಿಂದ ಭೂ ದಾಖಲೆಗಳನ್ನು (ಆರ್.ಟಿ.ಸಿ/ಪಹಣಿ) ಸಮಯಕ್ಕೆ ಸರಿಯಾಗಿ ನವೀಕರಿಸಲಾಗುತ್ತಿದೆ. |
| (ಆ) | 10-15 ವರ್ಷಗಳಿಗೂ ಹೆಚ್ಚು ಕಾಲ ಬಾಕಿ ಇರುವ ಭೂ ಮಾಲೀಕತ್ವದ ವಿವಾದಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: | • ಕಂದಾಯ ನ್ಯಾಯಾಲಯಗಳಾದ ತಹಸೀಲ್ದಾರ್, ಉಪವಿಭಾಗಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ಅರೆ ನ್ಯಾಯಿಕ ಪ್ರಕರಣಗಳನ್ನು RCCMS ತಂತ್ರಾಂಶದ ಮುಖಾಂತರ ಆನ್-ಲೈನ್ ನಲ್ಲಿಯೇ ನಿರ್ವಹಿಸಲಾಗುತ್ತಿದೆ.<br>• ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 193 ಟಿಆರ್‌ಎಂ 2019 ದಿನಾಂಕ:18.02.2021 ರಂತೆ ತಹಶೀಲ್ದಾರರ ನ್ಯಾಯಾಲಯದ ಪ್ರಕರಣಗಳನ್ನು ಇತ್ಯರ್ಥಪಡಿಸಲು 90 ದಿನಗಳನ್ನು ಹಾಗೂ ಉಪವಿಭಾಗಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ನ್ಯಾಯಾಲಯದ ಪ್ರಕರಣಗಳನ್ನು ಇತ್ಯರ್ಥಪಡಿಸಲು 180 ದಿನಗಳನ್ನು ನಿಗಧಿಪಡಿಸಲಾಗಿರುತ್ತದೆ.<br>• RCCMS ತಂತ್ರಾಂಶದ ಮೂಲಕ ಕಳೆದ 3 ವರ್ಷಗಳಲ್ಲಿ ಈ ಕೆಳಗಿನಂತೆ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿರುತ್ತದೆ. |

| COURT | PENDING AS ON 23.07.2023 | RECEIPTS DURING PERIOD | TOTAL | DISPOSAL DURING PERIOD | PENDING AS ON 13.08.2026 |
|---|---|---|---|---|---|
| TAH COURT | 24719 | 148842 | 173561 | 158505 | 15056 |
| AC COURT | 60934 | 64089 | 125023 | 114844 | 10179 |
| DC COURT | 15765 | 16989 | 32754 | 23829 | 8925 |
| | **101418** | **229920** | **331338** | **297178** | **34160** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಇ) | ನೋಂದಾಯಿತ ಭೂ ವಹಿವಾಟಿನ | ಭೂಮಿ ಮತ್ತು ಕಾವೇರಿ ತಂತ್ರಾಂಶವನ್ನು ಸಂಯೋಜನೆ ಮಾಡಲಾಗಿದ್ದು, ಅದರಂತೆ ಕಾವೇರಿ ತಂತ್ರಾಂಶದಲ್ಲಿ ಕ್ರಯ, ದಾನ, ವಿಭಾಗದ ಮೂಲಕ |

| | | |
|---|---|---|
| | ನಂತರವೂ ಏಕೆ ರೈತರು ರೂಪಾಂತರ ನಮೂದುಗಳಿಗಾಗಿ ಕಾಯುತ್ತಿದ್ದಾರೆ | ನೋಂದಣಿಯಾದ ನಂತರ ಖಾತೆ ಮಾಹಿತಿಯನ್ನು ಭೂಮಿ ತಂತ್ರಾಂಶಕ್ಕೆ ವರ್ಗಾಯಿಸಲಾಗುತ್ತದೆ ಹಾಗೂ / ದಿನಗಳ ನೋಟೀಸ್ ಅವಧಿಯಲ್ಲಿ ಯಾವುದೇ ತಕರಾರು ಸ್ವೀಕೃತವಾಗದಿದ್ದಲ್ಲಿ, ಆಟೋ ಮ್ಯುಟೇಶನ್ ಮೂಲಕ ಖಾತೆ ಬದಲಾವಣೆ ಮಾಡಲಾಗುತ್ತಿರುವುದರಿಂದ ರೈತರು ರೂಪಾಂತರ ನಮೂದುಗಳಿಗಾಗಿ ಕಾಯುವ ಅವಶ್ಯಕತೆ ಇರುವುದಿಲ್ಲ. |
| (ಈ) | ಅತಿಕ್ರಮಣ ಮತ್ತು ನಕಲಿ ದಾಖಲೆಗಳನ್ನು ತಡೆಗಟ್ಟಲು ಎಲ್ಲಾ ಕೃಷಿ ಭೂಮಿಯನ್ನು ಡಿಜಿಟಲ್ ನಕ್ಷೆ ಮಾಡುವ ಯೋಜನೆ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | • ಭೂ ಸುರಕ್ಷಾ ಯೋಜನೆಯಡಿ ತಾಲೂಕು ಕಚೇರಿಯ ಅಭಿಲೇಖಾಲಯಗಳಲ್ಲಿರುವ ಅತ್ಯಂತ ಪ್ರಮುಖವಾದ, ಹಳೆಯ ಮತ್ತು ಸ್ವಾತಂತ್ರ್ಯ ಪೂರ್ವ ಅವಧಿಯ ಭೂ ದಾಖಲೆಗಳನ್ನು ಇಂಡೆಕ್ಸಿಂಗ್, ಕ್ಯಾಟಲಾಗಿಂಗ್, ಸ್ಕ್ಯಾನಿಂಗ್ ಮತ್ತು ಅಪ್‌ಲೋಡಿಂಗ್ ಮಾಡಿ ಗಣಕೀಕರಣಗೊಳಿಸಲಾಗುತ್ತಿದೆ.<br>• ಹಳೆಯ ಶಿಥಿಲಗೊಂಡ ದಾಖಲೆಗಳನ್ನು ಶಾಶ್ವತವಾಗಿ ಡಿಜಿಟಲ್ ರೂಪದಲ್ಲಿ ಉಳಿಸಿಕೊಳ್ಳಲು, ನಕಲಿ ದಾಖಲೆಗಳ ಸೃಷ್ಟಿಯನ್ನು ತಡೆಗಟ್ಟಲು ಮತ್ತು ಅವುಗಳನ್ನು ಆನ್‌ಲೈನ್‌ನಲ್ಲಿ ನಾಗರಿಕರಿಗೆ ಲಭ್ಯವಾಗುವಂತೆ ಮಾಡುವ ನಿಟ್ಟಿನಲ್ಲಿ ಭೂ ಸುರಕ್ಷಾ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.<br>• ಡಿಜಿಟಲೀಕರಣದಿಂದ ಅಭಿಲೇಖಾಲಯದ ಸಿಬ್ಬಂದಿಗಳನ್ನು ಸಂಪರ್ಕಿಸಿ ದಾಖಲೆಗಳನ್ನು ಪಡೆಯುವುದು ತಪ್ಪುತ್ತದೆ. ಅಲ್ಲದೇ, ದಾಖಲೆಗಳ ವ್ಯತ್ಯಾಸ, ರೆಕಾರ್ಡ್ ಮಿಸ್ಸಿಂಗ್, ವಿಳಂಬ ಎಲ್ಲ ಸಮಸ್ಯೆಗಳು ಪರಿಹಾರ ಆಗಲಿದ್ದು, ನಾಗರೀಕರು ದಾಖಲೆಗಳಿಗಾಗಿ ಪದೇ ಪದೇ ಕಚೇರಿಗೆ ಭೇಟಿ ನೀಡುವ ಬದಲು ಸುಲಭವಾಗಿ ಆನ್‌ಲೈನ್ ಮೂಲಕ ದಾಖಲೆಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ. |

**ಕಡತ ಸಂಖ್ಯೆ: ಕಂಇ 170 ಟಿಆರ್ಎಂ 2026**

**(ಡಾ:ಜಿ.ಪರಮೇಶ್ವರ)**
ಉಪ ಮುಖ್ಯಮಂತ್ರಿ, ಕಂದಾಯ, ಯುವ
ಸಬಲೀಕರಣ ಮತ್ತು ಕ್ರೀಡಾ ಇಲಾಖೆ